## ಕರ್ನಾಟಕ ಸರ್ಕಾರ

**ವಿಷಯ:** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನೌಕರರನ್ನು ಉನ್ನತ ವ್ಯಾಸಂಗಕ್ಕೆ ನಿಯೋಜಿಸುವ ಬಗ್ಗೆ.

**ಓದಲಾಗಿದೆ:**
1. ಕುಲಪತಿಗಳು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ರವರ ಪತ್ರ ಸಂಖ್ಯೆ ಕರಾಗ್ರಾಅಪಂರಾವಿವಿ/ಪ್ರವೇಶ/2017, ದಿನಾಂಕ:28-07-2017 ಮತ್ತು ದಿನಾಂಕ 21/08/2017.
2. ಸರ್ಕಾರಿ ಆದೇಶ ಸಂಖ್ಯೆ ಎಫ್‌ಡಿ 02 ಎಸ್‌ಆರ್‌ಎ 2008, ದಿನಾಂಕ: 05-06-2008.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಪತ್ರದಲ್ಲಿ ಸುಸ್ಥಿರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ವಿಷಯದಲ್ಲಿ ಬೋಧನೆ, ತರಬೇತಿ ಹಾಗೂ ಸಂಶೋಧನೆಗಳಿಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿದೆ. ಇದರ ದೃಷ್ಟಿಯು ಸುಸ್ಥಿರ ಗ್ರಾಮೀಣಾಭಿವೃದ್ಧಿ ಹಾಗೂ ಗ್ರಾಮೀಣ ಜನತೆಯ ಜೀವನ ಗುಣಮಟ್ಟವನ್ನು ವಿಶಾಲ ಹರವಿನ ಸುಧಾರಣೆಯನ್ನು ಖಚಿತಪಡಿಸುವ ಗ್ರಾಮೀಣಾಭಿವೃದ್ಧಿ ಪ್ರಕ್ರಿಯೆಯಲ್ಲಿ ಭಾಗಿಯಾಗುವಂತಹ ಸಮರ್ಪಣಾ ಮನೋಭಾವದ, ಬದ್ಧತೆಯುಳ್ಳ, ಮಾನವ ಸಂಪನ್ಮೂಲವನ್ನು ಸೃಜಿಸುವ ಮೂಲಕ ಗ್ರಾಮೀಣ ಸಮಾಜವನ್ನು ಉತ್ಕೃಷ್ಟ ಕೇಂದ್ರವಾಗಿಸಲು ಕಾರ್ಯಮಗ್ನವಾಗುವುದು.

ವಿಶ್ವವಿದ್ಯಾಲಯದ ಗುರಿಯು ಬಡತನವನ್ನು ಕಡಿಮೆ ಮಾಡಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಿ ಜನರು ತಮ್ಮದೇ ಆದ ಕ್ಷೇಮಾಭಿವೃದ್ಧಿ, ಆರ್ಥಿಕ ಮತ್ತು ಸಾಮಾಜಿಕ-ರಾಜಕೀಯ ಪ್ರಗತಿಗೆ ನಿರ್ಧಾರಗಳನ್ನು ತೆಗೆದುಕೊಳ್ಳುವಂತಹ ಪಂಚಾಯತ್ ರಾಜ್ ಸಂಸ್ಥೆಗಳ ಪ್ರಜಾಪ್ರಭುತ್ವ ವ್ಯವಸ್ಥೆಯ ಮೂಲಕ ಅಂತರ್ಗತ ಬೆಳವಣಿಗೆಗೆ ಕಾರಣವಾಗುವ ಆರೋಗ್ಯ, ಶಿಕ್ಷಣ ಮತ್ತು ಕೌಶಲಾಭಿವೃದ್ಧಿಗಳಲ್ಲಿ ಅಗತ್ಯ ಸೇವೆಗಳನ್ನು ನೀಡಲು ಅವಕಾಶವಿರುವ ತ್ವರಿತ ಆರ್ಥಿಕ ಬೆಳವಣಿಗೆ ಮತ್ತು ಸುಸ್ಥಿರ ಅಭಿವೃದ್ಧಿಗಾಗಿ ಹಲವು ಧ್ಯೇಯೋದ್ದೇಶಗಳನ್ನೊಂದಿದೆ.

ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳಲ್ಲಿ ಪ್ರಮುಖವಾದುದು - ಬೆಳವಣಿಗೆ ಮತ್ತು ಸಮಗ್ರ ಗ್ರಾಮೀಣಾಭಿವೃದ್ಧಿ ಮುಖಾಂತರ ಗ್ರಾಮೀಣ ಪ್ರದೇಶಗಳ ಸುಧಾರಣೆಗಾಗಿ ಉದ್ಭವಿಸುವ ಸವಾಲುಗಳನ್ನು ಕೈಗೆತ್ತಿಕೊಂಡು ತಂತ್ರಜ್ಞಾನ ವ್ಯವಸ್ಥಾಪನಾ ಶ್ರೇಣಿಯನ್ನು ಅಭಿವೃದ್ಧಿಪಡಿಸಲು ಉನ್ನತ ಶಿಕ್ಷಣವನ್ನು ರೂಪಿಸಿ, ಪ್ರೋತ್ಸಾಹಿಸಿ ಬೋಧಿಸುವುದು;

ಈ ದಿಕ್ಕಿನಲ್ಲಿ ವಿಶ್ವವಿದ್ಯಾಲಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 ಕಂಡಿಕೆ 4 (3) ರಲ್ಲಿ ವಿವರಿಸಿರುವಂತೆ ಅನೇಕ ಧ್ಯೇಯೋದ್ದೇಶಗಳನ್ನು ಹೊಂದಿದೆ. ಈ ಧ್ಯೇಯೋದ್ದೇಶಗಳನ್ನು ಪೂರೈಸುವ ದಿಕ್ಕಿನಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರ ಪಾತ್ರ ಅತಿ ಹಿರಿದಾದುದು. ಅವರಿಗೆ ಸೂಕ್ತ ತರಬೇತಿ ನೀಡಿ ಈ ಪ್ರಕ್ರಿಯೆಯಲ್ಲಿ ಬದ್ಧತೆ ಮತ್ತು ಸಮರ್ಪಣಾ ಮನೋಭಾವದಿಂದ ಭಾಗಿಯಾಗುವಂತೆ ಮಾಡಲು ಅವರಿಗೆ ಉನ್ನತ ವ್ಯಾಸಂಗ ಹಾಗೂ ವಿಶೇಷ ತರಬೇತಿಯ ಅವಶ್ಯಕತೆ ಇದೆ. ಹಾಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ನಡೆಸುವ ಶಾಲೆಗಳಲ್ಲಿನ ವಿವಿಧ ಸ್ನಾತಕೊತ್ತರ ಉನ್ನತ ವ್ಯಾಸಂಗಕ್ಕೆ ಅಧಿಕಾರಿ/ನೌಕರರನ್ನು ನಿಯೋಜಿಸಲು ಅನುಮತಿ ನೀಡಲು ಕೋರಿರುತ್ತಾರೆ.

ಮೇಲೆ ಓದಲಾದ ಉಲ್ಲೇಖ(2)ರಲ್ಲಿಯ ಸರ್ಕಾರಿ ಆದೇಶದಲ್ಲಿ ಇಲಾಖಾ ನೌಕರರನ್ನು ಉನ್ನತ ವ್ಯಾಸಂಗಕ್ಕೆ/ವಿಶೇಷ ತರಬೇತಿಗೆ ನಿಯೋಜಿಸಲು ಅಧಿಕಾರ ನೀಡಿ ಷರತ್ತು ಮತ್ತು ನಿಬಂಧನೆಗಳ ಸೂಚನೆಗಳನ್ನು ನೀಡಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಗ್ರಾಅಪ 301 ಜಿಪಸ 2017, ದಿನಾಂಕ:17-10-2017**

ಮೇಲೆ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ, ಇಲ್ಲಿನ ಈ ಕೆಳಕಂಡ 5 ಶಾಲೆಗಳಲ್ಲಿ ಬೋಧಿಸುತ್ತಿರುವ ಸ್ನಾತಕೋತ್ತರ ಕೋರ್ಸುಗಳಿಗೆ (ಉನ್ನತ ವ್ಯಾಸಂಗ) ಪ್ರಥಮ ವರ್ಷದಲ್ಲಿ ಪ್ರತಿ ಕೋರ್ಸ್‌ಗೆ 5 ಜನ ಇಲಾಖಾ ಅಧಿಕಾರಿ/ನೌಕರುಗಳನ್ನು ಹಾಗೂ ಮುಂದಿನ ವರ್ಷಗಳಲ್ಲಿ ಪ್ರತಿ ಕೋರ್ಸ್‌ಗೆ 2 ಜನ ಅರ್ಹ ಇಲಾಖಾ ಅಧಿಕಾರಿ/ನೌಕರರನ್ನು ನಿಯೋಜನೆ ಮೇಲೆ ಕಳುಹಿಸಲು ಈ ಮೂಲಕ ಆದೇಶಿಸಲಾಗಿದೆ.

1. ಕೃಷಿ ವ್ಯವಹಾರ ವ್ಯವಸ್ಥಾಪನೆ ಮತ್ತು ಗ್ರಾಮೀಣಾಭಿವೃದ್ಧಿ ವ್ಯವಸ್ಥಾಪನಾ ಶಾಲೆ
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಶಾಲೆ
3. ಪರಿಸರ ವಿಜ್ಞಾನ ಮತ್ತು ಸಾರ್ವಜನಿಕ ಆರೋಗ್ಯ ಹಾಗೂ ನೈರ್ಮಲ್ಯ ವ್ಯವಸ್ಥಾಪನಾ ಶಾಲೆ
4. ಸಾಮಾಜಿಕ ವಿಜ್ಞಾನ ಮತ್ತು ಗ್ರಾಮೀಣ ಪುನರಚನಾ ಶಾಲೆ
5. ಕೌಶಲ್ಯ ಮತ್ತು ಉದ್ಯಮಶೀಲತಾ ಅಭಿವೃದ್ಧಿ ಶಾಲೆ

ಈ ನಿಯೋಜನೆ ಮೇಲೆ ಓದಲಾದ (2) ರ ಸರ್ಕಾರಿ ಆದೇಶದಲ್ಲಿ ಒಳಗೊಂಡಿರುವ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅನುಬಂಧ-IIA ನಲ್ಲಿರುವ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ:

1. ನಿರಂತರ 5 ವರ್ಷಗಳಿಗಿಂತ ಕಡಿಮೆ ಇಲ್ಲದಷ್ಟು ಅವಧಿಯವರೆಗೆ ಸೇವೆ ಸಲ್ಲಿಸಿದ ಮತ್ತು 48 ವರ್ಷ ವಯಸ್ಸಿಗಿಂತ ಕಡಿಮೆ ವಯಸ್ಸಿನ ಸರ್ಕಾರಿ ನೌಕರರನ್ನು ಪರಿಗಣಿಸುವುದು.
2. ಅವನ ಸೇವಾ ಅವಧಿಯಲ್ಲಿ ಒಂದು ಬಾರಿ ಉನ್ನತ ವ್ಯಾಸಂಗ ಅಥವಾ ವಿಶೇಷ ತರಬೇತಿಗಾಗಿ ಪ್ರತಿನಿಯೋಜಿಸಬಹುದಾಗಿದೆ.
3. ಸರ್ಕಾರಿ ನೌಕರರು ತಮ್ಮ ಪರಿವೀಕ್ಷಣಾ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರಬೇಕು.
4. ಪ್ರವೇಶ ಪಡೆದ ಕೋರ್ಸ್‌ನ್ನು ವಿಶ್ವವಿದ್ಯಾಲಯದ ನಿಯಮಗಳ ಪ್ರಕಾರ ನಿರ್ಧಿಷ್ಟ ಸಮಯದಲ್ಲಿ ಪಾಸು ಮಾಡಿ ಪದವಿ ಪಡೆಯಬೇಕು. ತಪ್ಪಿದಲ್ಲಿ ಅವರಿಗೆ ನಿಯೋಜನೆ ಅವಧಿಯಲ್ಲಿ ನೀಡಿದ ವೇತನ ಹಾಗೂ ಇತರೆ ಭತ್ಯೆಗಳನ್ನು ಇಲಾಖೆಗೆ ಮರಳಿ ಕಟ್ಟತಕ್ಕದ್ದು.
5. ಅಭ್ಯರ್ಥಿಗಳ ಸ್ನಾತಕೊತ್ತರ ಪದವಿಯ ಅವಧಿಗೆ ಮಾತ್ರ ನಿಯೋಜನಾ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.
6. ಇಲಾಖೆಯಿಂದ ನಿಯೋಜಿತ ಅರ್ಹ ಅಧಿಕಾರಿಗಳ/ಸರ್ಕಾರಿ ನೌಕರರನ್ನು ವಿಶ್ವವಿದ್ಯಾಲಯದ ನಿಯಮಗಳ ಪ್ರಕಾರ ಮೆರಿಟ್ ಕಂ ಮೀಸಲಾತಿ ನಿಯಮಗಳ ಪ್ರಕಾರ ಪ್ರವೇಶ ನೀಡುವುದು.
7. ವಿಶ್ವವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿ ಪ್ರವೇಶ ಬಯಸುವವರು ಇನ್ನಾವುದೇ ವಿಷಯದಲ್ಲಿ ಈಗಾಗಲೇ ಒಂದು ಸ್ನಾತಕೋತ್ತರ ಪದವಿ ಹೊಂದಿರದವರಿಗೆ ಪ್ರಥಮ ಪ್ರಾಧ್ಯಾನ್ಯತೆ ಕೊಡುವುದು.
8. ಪ್ರವೇಶ ಪಡೆದ ಅರ್ಹ ನೌಕರದಾಥರು ವಿಶ್ವವಿದ್ಯಾಲಯದ ನಿಯಮಗಳ ಪ್ರಕಾರ ಟ್ಯೂಷನ್ ಶುಲ್ಕ ಹಾಗೂ ಇತರ ಶುಲ್ಕಗಳನ್ನು ತಾವೇ ಭರಿಸುವುದು.

9. ಪ್ರತಿನಿಯೋಜನೆ ಅವಧಿಯಲ್ಲಿ,

ಅ) ವೇತನ ಅಂದರೆ, ಉನ್ನತ ವಿದ್ಯಾಭ್ಯಾಸ ಅಥವಾ ವಿಶೇಷ ತರಬೇತಿಗಾಗಿ ಅಥವಾ ನಿಯೋಜನೆ ಮೇಲಿಲ್ಲದಿದ್ದರೆ ಅವನು ಪಡೆಯಬಹುದಾಗಿದ್ದ ಮೂಲ ವೇತನ, ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ನಗರ ಪರಿಹಾರ ಭತ್ಯೆ ಈ ಹಿಂದೆ ಪಡೆಯುತ್ತಿದ್ದ ಸೌಲಭ್ಯಗಳನ್ನು ಪಡೆಯಬಹುದು. ವಿಸ್ತರಣಾ ಅವಧಿಯಲ್ಲಿ ಸರ್ಕಾರಿ ನೌಕರನು ಈ ನಿಯಮಗಳ ಮೇರೆಗೆ ಲಭ್ಯವಾಗುವ ರಜಾ ವೇತನಗಳಿಗೆ ಮಾತ್ರ ಅರ್ಹನಾಗಿರತಕ್ಕದ್ದು.

ಆ) ವ್ಯಾಸಂಗ ಅಥವಾ ತರಬೇತಿಗಾಗಿ ಪ್ರತಿನಿಯೋಜನೆಗಾಗಿ ಆಯ್ಕೆಯಾದ ಸರ್ಕಾರಿ ನೌಕರನು, ಕರ್ತವ್ಯಗಳಿಂದ ಬಿಡುಗಡೆ ಹೊಂದುವ ಮೊದಲು ಈ ನಿಯಮಗಳಿಗೆ ಲಗತ್ತಿಸಿರುವ ನಮೂನೆ ಸಂಖ್ಯೆ 19 ರಲ್ಲಿ ಒಂದು ಮುಚ್ಚಳಿಕೆ ಪತ್ರವನ್ನು ಬರೆದುಕೊಡಬೇಕು. ಪ್ರತಿನಿಯೋಜನೆಯ ಅವಧಿಯಲ್ಲಾಗಲಿ ಅಥವಾ ಪ್ರತಿನಿಯೋಜನೆ ಮುಗಿದ ನಂತರ ಕರ್ತವ್ಯಕ್ಕೆ ಹಾಜರಾದ ಮೂರು ತಿಂಗಳ ಅವಧಿಯೊಳಗಾಗಲಿ ಸರ್ಕಾರಿ ಸೇವಾ ನಿಯಮಗಳ ಉಪಬಂಧ 285ರ ಮೇರೆಗೆ ಅವನು ಸೇವೆಯಿಂದ ನಿವೃತ್ತಿ ಹೊಂದಲು ಅವನಿಗೆ ಯಾವುದೇ ಅವಕಾಶವಿರುವುದಿಲ್ಲ.

ಇದಕ್ಕೆ ಸಂಬಂಧಿಸಿದ ಹಾಲಿ ನಿಯಮಗಳಲ್ಲಿ ಯಾವುದೇ ಉಲ್ಲಂಘನೆಯಾಗಬಾರದು, ಉನ್ನತ ವ್ಯಾಸಂಗ ಮುಂದುವರಿಸಲು ಆಸಕ್ತಿಯುಳ್ಳ ಅರ್ಹ ಇಲಾಖಾ ನೌಕರರು ನೇರವಾಗಿ ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ರೈತ ಭವನ, ಜನರಲ್ ಕಾರಿಯಪ್ಪ ಸರ್ಕಲ್, ಗದಗ-582101 ಇವರಿಗೆ ಈ ಆದೇಶದ ದಿನಾಂಕದಿಂದ 10 ದಿನಗಳಲ್ಲಿ ಅರ್ಜಿಯನ್ನು ಸಲ್ಲಿಸಬಹುದು. ಅರ್ಜಿಯನ್ನು ಸೂಕ್ತ ಶೈಕ್ಷಣಿಕ ಅರ್ಹತಾ ದಾಖಲೆಗಳೊಂದಿಗೆ ಖುದ್ದಾಗಿ/ಇ-ಮೇಲ್(registrarksrdpru@gmail.com) ಮೂಲಕ ಕಳುಹಿಸಕೊಡಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯದ ಅಂತರ್‌ಜಾಲ www.ksrdpru.inನ್ನು ವೀಕ್ಷಿಸಬಹುದು. ವಿಶ್ವವಿದ್ಯಾಲಯದ ವಿವಿಧ ಕೋರ್ಸ್‌ಗಳ ಅರ್ಹತೆ ಮತ್ತು ಪ್ರವೇಶ ನಿಯಮಗಳು ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಅನುಬಂಧ-IIA ರಲ್ಲಿರುವ ನಿಯಮಗಳನ್ನು ಅನುಸರಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು.

ಸದರಿ ಆದೇಶವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಇವರಿಗೆ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 2 ಎಸ್‌ಆರ್‌ಎ 2008, ದಿನಾಂಕ:05-06-2008 ರಲ್ಲಿ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/10/2017

ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

17.10.17

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಕುಲಪತಿಗಳು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
4. ಕುಲಸಚಿವರು, ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ.
5. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್.
6. ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್ ಇವರಿಗೆ ಆಯಾಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ.
7. ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಉಪನಿರ್ದೇಶಕರು, ರಾಜ್ಯದ ಎಲ್ಲಾ ಜಿಲ್ಲಾ ಖಜಾನೆ.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.